# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2401 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ರೈತ ಉತ್ಪಾದಕರ ಕಂಪನಿಗಳಿಗೆ (ಎಫ್.ಪಿ.ಓ) ಖರೀದಿ ಕೇಂದ್ರಗಳನ್ನು ನಡೆಸಲು ಪರವಾನಗಿ ನೀಡುವ ಸಂಬಂಧ ಸರ್ಕಾರದ ಪ್ರಸ್ತುತ ನೀತಿ ಏನು; ರೈತರಿಗೆ ನೇರವಾಗಿ ಅನುಕೂಲವಾಗುವಂತಹ ಸಂಸ್ಥೆಗಳಿಗೆ ಆದ್ಯತೆ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ; (ವಿವರ ನೀಡುವುದು) | 2025-26 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ರಾಗಿ, ಬಿಳಿಜೋಳ ಭತ್ತ, ಮತ್ತು ಕಿರುಸಿರಿಧಾನ್ಯಗಳನ್ನು ಖರೀದಿಗೆ TAPCMS/ PACS/ FPOs/SHGಕ್ ಗಳನ್ನು ಉಪ ಏಜೆನ್ಸಿಗಳನ್ನಾಗಿ ನೇಮಿಸಲು ಅರ್ಹ ಸಹಕಾರ ಸಂಸ್ಥೆಗಳನ್ನು ಗುರುತಿಸಲು ಆಯುಕ್ತರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಪ್ರತಿನಿಧಿಗಳನ್ನು ಒಳಗೊಂಡ ಸಮಿತಿಯನ್ನು ರಚಿಸಿ ಸರ್ಕಾರದ ಆದೇಶ ಸಂಖ್ಯೆ ಆನಾಸ 123 ಆರ್‌ಪಿಆರ್ 2025 ದಿನಾಂಕ 12.09.2025 ರಲ್ಲಿ ಆದೇಶಿಸಲಾಗಿರುತ್ತದೆ.<br>ಸಮಿತಿಯು ಸದಸ್ಯರ ವಿವರ ಹಾಗೂ TAPCMS/ PACS/FPOs/SHGs ಗಳನ್ನು ಆಯ್ಕೆ ಮಾಡಲು ಅನುಸರಿಸಬೇಕಾದ ಮಾನದಂಡಗಳ ಬಗ್ಗೆ ಸರ್ಕಾರದ ಆದೇಶದ ಪ್ರತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ | ರಾಯಚೂರು ಜಿಲ್ಲೆಯ ರೈತ ಉತ್ಪಾದಕ ಕೇಂದ್ರಗಳಿಗೆ (ಎಫ್.ಪಿ.ಓ) 2023-24 ನೇ ಸಾಲಿನ ಸೇವಾ ಶುಲ್ಕವನ್ನು ಇದುವರೆಗೆ ನೀಡಿಲ್ಲವೆಂಬ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದರ ಕುರಿತು ಸರ್ಕಾರದ ಕ್ರಮವೇನು; | ಬಂದಿರುತ್ತದೆ.<br>2023-24 ನೇ ಸಾಲಿಗೆ ಸಂಬಂಧಿಸಿದಂತೆ ಸಹಕಾರ ಸಂಸ್ಥೆಗಳು ಖರೀದಿ ಏಜೆನ್ಸಿಯಾಗಿ ಕಾರ್ಯನಿರ್ವಹಿಸಿರುವುದಕ್ಕೆ ಸೊಸೈಟಿ ಕಮಿಷನ್ ಅನ್ನು ನಿಗಧಿಪಡಿಸಲಾಗಿರುತ್ತದೆ ಸದರಿ ಮೊತ್ತ ಪಾವತಿಸಲು ಕೇಂದ್ರ ಸರ್ಕಾರದಿಂದ ಹಣ ಬಿಡುಗಡೆಯಾಗಬೇಕಿರುತ್ತದೆ. ಕೇಂದ್ರ ಸರ್ಕಾರದಿಂದ ಹಣ ಬಿಡುಗಡೆಯಾದ ಕೂಡಲೇ ಸೊಸೈಟಿ ಕಮಿಷನ್‌ನ್ನು ಪಾವತಿಸಲು ನಿಯಮಾನುಸಾರ ಕ್ರಮವಹಿಸಲಾಗುವುದು. |
| ಇ | ಸಣ್ಣ ಹಾಗೂ ಅತೀ ಸಣ್ಣ ರೈತರಿಗೆ ಸಮೀಪದಲ್ಲೇ ಬೆಳೆ ಮಾರಾಟ ಸೌಲಭ್ಯ ಒದಗಿಸುವ ಉದ್ದೇಶದಿಂದ ಭತ್ತ, ತೊಗರಿ, ಕಡಲೆ, ಜೋಳ ಸೇರಿದಂತೆ ವಿವಿಧ ಬೆಳೆಗಳ ಖರೀದಿ ಕೇಂದ್ರಗಳನ್ನು ರೈತ ಉತ್ಪಾದಕರ ಕಂಪನಿಗಳ ಮೂಲಕ ಆರಂಭಿಸಲು ಸರ್ಕಾರ ವಿಶೇಷ ಯೋಜನೆ ರೂಪಿಸುವ ಯೋಚನೆ ಹೊಂದಿದೆಯೇ; ಹೊಂದಿದ್ದಲ್ಲಿ ಸಂಪೂರ್ಣ ವಿವರ ನೀಡುವುದು; | ಸದರಿ ಸಂಸ್ಥೆಗಳಿಗೆ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ನೀಡಲಾಗುವ ಸೇವಾ ಶುಲ್ಕದಲ್ಲಿ ಖರೀದಿ ಸಂಸ್ಥೆಗಳು ನೇರವಾಗಿ ಪಾವತಿಸಲು ಅವಕಾಶ ಕಲ್ಪಿಸಲಾಗಿರುತ್ತದೆ |
| | | 2025-26 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ |

| | | |
|---|---|---|
| ಈ | ರಾಜ್ಯದಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿರುವ ರೈತ ಉತ್ಪಾದಕರ ಕಂಪನಿಗಳಿಗೆ ಖರೀದಿ ಕೇಂದ್ರ ಪರವಾನಗಿ ನೀಡುವ ಪ್ರಕ್ರಿಯೆಯನು ಸರಳೀಕರಿಸಲು ಹಾಗೂ ಅವುಗಳ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರವನ್ನು ನೀಡುವುದು) | ಯೋಜನೆಯಡಿ ರಾಜ್ಯದ ರೈತರಿಂದ ರಾಗಿ, ಬಿಳಿಜೋಳ, ಭತ್ತ ಮತ್ತು ಕಿರುಸಿರಿಧಾನ್ಯಗಳನ್ನು ಖರೀದಿಗೆ TAPCMS/PACS/FPOs/SHGS ಗಳನ್ನು ಉಪ ಏಜೆನ್ಸಿಗಳನ್ನಾಗಿ ನೇಮಿಸಲು ಅರ್ಹ ಸಹಕಾರ ಸಂಸ್ಥೆಗಳನ್ನು ಗುರುತಿಸಲು 08 ಮಾನದಂಡಗಳನ್ನು ನಿಗಧಿಪಡಿಸಲಾಗಿರುತ್ತದೆ.<br>ಆದರೆ ಸದರಿ ಮಾನದಂಡಗಳಲ್ಲಿ TAPCMS/PACS/FPOs/SHGs ಗಳು ನ್ಯಾಯಬೆಲೆ ಅಂಗಡಿ ಪ್ರಾಧಿಕಾರ ಹೊಂದಿರಬಾರದು ಹಾಗೂ ಹಿಂದಿನ ಮೂರು ವರ್ಷಗಳಲ್ಲಿ ಆರ್ಥಿಕ ನಿರ್ವಹಣಾ ನಷ್ಟ ಹೊಂದಿರಬಾರದು ಎಂಬ ಮಾನದಂಡಗಳಿಗೆ ವಿನಾಯಿತಿ ನೀಡಿ ಸರ್ಕಾರದ ಪತ್ರ ಸಂಖ್ಯೆ ಆನಾಸ 106 ಆರ್‌ಪಿಆರ್ 2025 ದಿನಾಂಕ 21.06.2026 ರಲ್ಲಿ ತಿಳಿಸಲಾಗಿದೆ.<br>ಈ ಮೂಲಕ ರಾಜ್ಯದಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿರುವ ರೈತ ಉತ್ಪಾದಕರ ಕಂಪನಿಗಳನ್ನು ಖರೀದಿ ಕೇಂದ್ರವಾಗಿ ಪರಿಗಣಿಸುವ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. |

ಆನಾಸ 54 ಆರ್‌ಪಿಆರ್ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು

ಕೆ.ಹೆಚ್. ಮುನಿಯಪ್ಪ
ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ
ವ್ಯವಹಾರಗಳ ಸಚಿವರು

**<u>ಕರ್ನಾಟಕ ಸರ್ಕಾರದ ನಡವಳಿಗಳು</u>**

**ವಿಷಯ:2025-26ನೇ** ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಭತ್ತ, ರಾಗಿ, ಜೋಳ ಮತ್ತು ಕಿರು ಸಿರಿಧಾನ್ಯಗಳ ಖರೀದಿಗೆ ಸಂಬಂಧಿಸಿದಂತೆ **TAPCMS/ PACS/FPOs/SHGs** ಗುರುತಿಸಲು ಸಮಿತಿ ರಚಿಸುವ ಬಗ್ಗೆ.

**ಓದಲಾಗಿದೆ:-**ಸಚಿವ ಸಂಪುಟ ಉಪ ಸಮಿತಿ ಸಭೆಯ ನಡವಳಿ ದಿನಾಂಕ:**07.08.2025**

*****

ಮೇಲೆ ಓದಲಾದ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಕೈಗೊಂಡ ನಿರ್ಣಯದನ್ವಯ **2025-26**ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಭತ್ತ, ರಾಗಿ, ಜೋಳ ಮತ್ತು ಕಿರು ಸಿರಿಧಾನ್ಯಗಳ ಖರೀದಿಗೆ **TAPCMS/ PACS/FPOs/SHGs** ಗುರುತಿಸಲು ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಪ್ರತಿನಿಧಿಗಳನ್ನು ಒಳಗೊಂಡ ಸಮಿತಿಯನ್ನು ರಚಿಸಲು ತೀರ್ಮಾನಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಸಚಿವ ಸಂಪುಟ ಉಪ ಸಮಿತಿ ನಿರ್ಣಯದನ್ವಯ **2025-26**ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಭತ್ತ, ರಾಗಿ, ಜೋಳ ಮತ್ತು ಕಿರು ಸಿರಿಧಾನ್ಯಗಳ ಖರೀದಿಗೆ **TAPCMS/ PACS/FPOs/SHGs** ಗುರುತಿಸಲು ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಪ್ರತಿನಿಧಿಗಳನ್ನು ಒಳಗೊಂಡ ಸಮಿತಿಯನ್ನು ರಚಿಸಲು ತೀರ್ಮಾನಿಸಲಾಗಿದೆ. ಆದ್ದರಿಂದ, ಈ ಕೆಳಕಂಡ ಆದೇಶ;

**<u>ಸರ್ಕಾರದ ಆದೇಶ ಸಂಖ್ಯೆ: ಇ- ಆನಾಸ 123 ಆರ್ ಪಿಆರ್ 2025</u>(1859274)**

**<u>ಬೆಂಗಳೂರು, ದಿನಾಂಕ: 12.09.2025</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, **2025-26**ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಭತ್ತ, ರಾಗಿ, ಜೋಳ ಮತ್ತು ಕಿರು ಸಿರಿಧಾನ್ಯಗಳ ಖರೀದಿಗೆ **TAPCMS/ PACS/FPOs /SHGs** ಗುರುತಿಸಲು ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಪ್ರತಿನಿಧಿಗಳನ್ನೊಳಗೊಂಡ ಒಳಗೊಂಡ ಈ ಕೆಳಕಡ ಸಮಿತಿಯನ್ನು ರಚಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಹುದ್ದೆ ಹಾಗೂ ಇಲಾಖೆಯ ಹೆಸರು | |
|---|---|---|
| 1 | ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು. | ಅಧ್ಯಕ್ಷರು, |
| 2 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು | ಸದಸ್ಯರು |
| 3 | ಜಂಟಿ ನಿರ್ದೇಶಕರು(ಸಂ.ವಿ), ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು. | ಸದಸ್ಯರು |

..2

12/09/2025

| | | |
|---|---|---|
| 4 | ಅಪರ ನಿಬಂಧಕರು,(ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು) ಸಹಕಾರ ಇಲಾಖೆ, ಬೆಂಗಳೂರು. | ಸದಸ್ಯರು |
| 5 | ಅಪರ ಕೃಷಿ ನಿರ್ದೇಶಕರು, ಕೃಷಿ ಆಯುಕ್ತರ ಕಛೇರಿ, ಕೃಷಿ ಇಲಾಖೆ, ಬೆಂಗಳೂರು. | ಸದಸ್ಯರು |
| 6 | ಜಂಟಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು. | ಸದಸ್ಯರು |
| 7 | ಪ್ರಧಾನ ವ್ಯವಸ್ಥಾಪಕರು, ಭಾರತ ಆಹಾರ ನಿಗಮ ಕರ್ನಾಟಕ, ಬೆಂಗಳೂರು. | ಸದಸ್ಯರು |
| 8 | ಪ್ರಧಾನ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಉಗ್ರಾಣ ನಿಗಮ, ಬೆಂಗಳೂರು. | ಸದಸ್ಯರು |
| 9 | ಅಪರ ನಿರ್ದೇಶಕರು/ಜಂಟಿ ನಿರ್ದೇಶಕರು, ಕೃಷಿ ಮಾರುಕಟ್ಟೆ ಇಲಾಖೆ, ಬೆಂಗಳೂರು. | ಸದಸ್ಯರು |
| 10 | ಪ್ರಧಾನ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು. | ಸಂಚಾಲಕರು |

ರಾಜ್ಯ ಮಟ್ಟದ ಸಮಿತಿಯು ಗುರುತಿಸುವ/ನಿಗಧಿಪಡಿಸುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮತ್ತು ಸ್ವಸಹಾಯ ಸಂಘಗಳ ವಿವರಗಳನ್ನು ಸರ್ಕಾರಕ್ಕೆ ಮಂಡಿಸಿ ಸರ್ಕಾರದಿಂದ ಅನುಮೋದಿಸಲ್ಪಟ್ಟ ಖರೀದಿ ಕೇಂದ್ರಗಳ ವಿವರಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾ ಟಾಸ್ಕ್ ಫೋರ್ಸ್ ಸಭೆಯಲ್ಲಿ ಕೂಲಂಕಷವಾಗಿ ಚರ್ಚಿಸಿ, ಸದರಿ ಖರೀದಿ ಕೇಂದ್ರಗಳನ್ನು ಅಂತಿಮಗೊಳಿಸಿ ಅಧಿಸೂಚಿಸಲ್ಪಟ್ಟ ತರುವಾಯ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿ ಕೇಂದ್ರಗಳನ್ನಾಗಿ ಪ್ರಾರಂಭಿಸಲು ಅಗತ್ಯವಿರುವ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಖರೀದಿ ಪ್ರಕ್ರಿಯೆಯನ್ನು ಯಶಸ್ವಿಯಾಗಿ, ರೈತಸ್ನೇಹಿಯಾಗಿ ನಡೆಸಿಕೊಂಡು ಹೋಗಲು ತಯಾರು ಮಾಡುವ ಬಗ್ಗೆ ಎಲ್ಲಾ ಉಸ್ತುವಾರಿಯನ್ನು ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚಿಸಿದೆ.

## TAPCMS/ PACS/FPOs/SHGs ಆಯ್ಕೆ ಮಾಡಲು ಅನುಸರಿಸಬೇಕಾದ ಮಾನದಂಡಗಳು

1. TAPCMS/PACS/FPOs/SHGs ಕರ್ನಾಟಕ ಸಹಕಾರ ಸಂಘಗಳ ನಿಯಮಗಳಡಿಯಲ್ಲಿ ನೋಂದಣಿಯಾಗಿರತಕ್ಕದ್ದು ಹಾಗೂ ಸದರಿ ಸಂಘಗಳು ಮೂಲಭೂತ ಸೌಕರ್ಯ ಹಾಗೂ ಎಂಎಸ್‌ಪಿ ಪ್ರಕ್ರಿಯೆಯಲ್ಲಿ ಭಾಗವಹಿಸುವ ಆಸಕ್ತಿಯನ್ನು ಹೊಂದಿರಬೇಕು.
2. ಭೌಗೋಳಿಕವಾಗಿ ಅಗತ್ಯವಿರುವ ಕಡೆ ಅಂದರೆ ಪ್ರತಿ ಹೋಬಳಿಗೆ ಒಂದರಂತೆ ಆಯ್ಕೆ ಮಾಡತಕ್ಕದ್ದು.
3. ಹೆಚ್ಚಿನ ಪ್ರಮಾಣದಲ್ಲಿ ಖರೀದಿಯಾಗುವ ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ಒತ್ತು ನೀಡುವುದು.
4. TAPCMS/ PACS/FPOs/SHGs ನ್ಯಾಯಬೆಲೆ ಅಂಗಡಿ ಪ್ರಾಧಿಕಾರ ಹೊಂದಿರಬಾರದು.
5. TAPCMS/ PACS/FPOs/SHG ಗಳು ಹಿಂದಿನ ಮೂರು ವರ್ಷಗಳಲ್ಲಿ ಆರ್ಥಿಕ ನಿರ್ವಹಣಾ ನಷ್ಟ ಹೊಂದಿರಬಾರದು.

-3

[signature] 12/09/2025

6. TAPCMS/ PACS/FPOs/SHG ಗಳು ಖರೀದಿ ಕೇಂದ್ರಗಳಲ್ಲಿ ಖರೀದಿಯಾಗುವ ಆಹಾರಧಾನ್ಯಗಳನ್ನು ತಾತ್ಕಾಲಿಕವಾಗಿ ಸುರಕ್ಷಿತವಾಗಿ ಸಂಗ್ರಹಿಸಲು ಸೂಕ್ತ ಗೋದಾಮಿನ ವ್ಯವಸ್ಥೆ ಹೊಂದಿರತಕ್ಕದ್ದು.
7. TAPCMS/ PACS/FPOs/SHG ಸಂಸ್ಥೆಗಳು ಯಾವುದೇ ಅವ್ಯವಹಾರದಲ್ಲಿ ಒಳಗೊಂಡಿರುವ ಹಿನ್ನೆಲೆ ಹೊಂದಿರಬಾರದು.
8. TAPCMS/ PACS/FPOs/SHG ಸಂಸ್ಥೆಗಳು ರೈತರಿಂದ ಖರೀದಿಸುವ ಆಹಾರಧಾನ್ಯ ಖರೀದಿ ಮಾಹಿತಿಯನ್ನು ದತ್ತಾಂಶದಲ್ಲಿ ನಮೂದಿಸಲು ವಿದ್ಯುನ್ಮಾನ ಯಂತ್ರ ಹಾಗೂ ಪರಿಣಿತ ಮಾನವ ಸಂಪನ್ಮೂಲವನ್ನು ಹೊಂದಿರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಹಿ) 12/09/2025

**(ನರಸಿಂಹಮೂರ್ತಿ ಜಿ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ(ಆಹಾರ-1&2)
ಆಹಾರ ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ,

ಇವರಿಗೆ:

1. ಪ್ರಧಾನ ಮಹಾಲೇಖಪಾಲರರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329,ಬೆಂಗಳೂರು-560001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು.
5. ಆಯುಕ್ತರು,ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
7. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು **(ಆಹಾರ ಧಾನ್ಯಗಳ ಖರೀದಿಗೆ ಸಂಬಂಧಿಸಿದಂತೆ ಕೂಡಲೇ ಅಗತ್ಯ ಕ್ರಮವನ್ನು ಕೈಗೊಳ್ಳುವಂತೆ ಕೋರಿದೆ)**
8. ವ್ಯವಸ್ಥಾಪಕ ನಿರ್ದೇಶಕರು (ಕೆ.ಟಿ.ಕೆ), ಭಾರತ ಆಹಾರ ನಿಗಮ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-5, ವಿಧಾನಸೌಧ, ಬೆಂಗಳೂರು,
10. ಸಂಬಂಧಪಟ್ಟ ಜಿಲ್ಲೆಯ ಜಂಟಿ ನಿರ್ದೇಶಕರು /ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು (IRA) , ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, (ಆಯುಕ್ತರು, ಆನಾಸ & ಗ್ರಾವ್ಯ ಇಲಾಖೆ ಇವರ ಮುಖಾಂತರ)
11. ಸಂಬಂಧಪಟ್ಟ ಜಿಲ್ಲೆಯ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, (ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು ಇವರ ಮುಖಾಂತರ)

12. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಅಧ್ಯಕ್ಷರು, ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಬೆಂಬಲ ಬೆಲೆ ಸಚಿವ ಸಂಪುಟ ಉಪ ಸಮಿತಿ ಹಾಗೂ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.